# ಹಂಪಿ ಟೈಮ್ಸ್
HAMPI TIMES

ಸಂಪಾದಕ: ಬಸಾಪುರ ಬಸವರಾಜ
EDITOR: BASAPUR BASAVARAJA

ಕನ್ನಡ ದಿನಪತ್ರಿಕೆ
KANNADA DAILY



ಇಂದು ಹಾಗೂ ಹಿಂದಿನ ಹಂಪಿ ಟೈಮ್ಸ್ ಕಲರ್‌ಫುಲ್ ಇ-ದಿನಪತ್ರಿಕೆ ಓದಲು QR ಕೋಡ್ ಸ್ಕ್ಯಾನ್ ಮಾಡಿ ಓದಿರಿ



No.1 Leading in Local News Paper

60,000

HAMPI TIMES E-PAPER READES

94486 33038 | NEWS PAPER ADD - THE BEST ADVERTISING PLATFORM TO BOOST YOUR BUSINESS

E-mail: hampitimes@gmail.com | # Valmiki Circle hospet-583201



ಸಂಪುಟ:01 • ಸಂಚಿಕೆ:317 • ನೋಂದಣಿ ನಂ.:KARKAN27911 • ವಿಜಯನಗರ • 18.05.2024 • ಶನಿವಾರ • ಪುಟ:04 • ಬೆಲೆ:2
Volume:01 • Issue:317 • Reg.No:KARKAN27911 • VIJAYANAGARA • 18.05.2024 • Saturday • Page:04 • Rs:2



ಮಕ್ಕಳ ಜ್ಞಾನ ವಿಕಾಸಕ್ಕೆ
ಮನೆಗೊಂದು ಕನ್ನಡ ದಿನಪತ್ರಿಕೆ ಇರಲಿ


# ಪೊಲೀಸರ ತಾತ್ಸಾರಕ್ಕೆ ಯುವತಿ ಬಲಿ

## ಗಂಗಾಮತ ಸಮಾಜದ ಮುಖಂಡರ ಆರೋಪ | ಹಿಂದುಳಿದವರ ಬಗ್ಗೆ ಸರ್ಕಾರ ನಿರ್ಲಕ್ಷ್ಯ | ಮುಂದುವರಿದ ತಾರತಮ್ಯ

## ಯುವತಿ ಪಾಲಕರಿಗೆ 50 ಲಕ್ಷ ರೂ. ಪರಿಹಾರಕ್ಕೆ ಆಗ್ರಹ | ಜಾತಿ ಧರ್ಮದ ಹಂಗಿಲ್ಲದೆ ಎಲ್ಲರನ್ನೂ ಸಮನಾಗಿ ಕಾಣಿ

**ಹಂಪಿ ಟೈಮ್ಸ್ ಹೊಸಪೇಟೆ**

ಹುಬ್ಬಳ್ಳಿಯಲ್ಲಿ ನಡೆದ ಅಂಜಲಿ ಅಂಬಿಗೇರ್ ಬರ್ಬರ ಹತ್ಯೆಯ ಆರೋಪಿಗೆ ಕಠಿಣ ಶಿಕ್ಷೆ ವಿಧಿಸಬೇಕು ಹಾಗೂ ಮೃತಳ ಕುಟುಂಬಕ್ಕೆ ಆರ್ಥಿಕ ಪರಿಹಾರ ಒದಗಿಸಬೇಕೆಂದು ಆಗ್ರಹಿಸಿ ಘೋಷಣೆಗಳನ್ನು ಕೂಗುತ್ತಾ ಜಿಲ್ಲಾಧಿಕಾರಿಗಳ ಕಛೇರಿಗೆ ಆಗಮಿಸಿದ ವಿಜಯನಗರ ಜಿಲ್ಲೆ ಗಂಗಾಮತ ಸಮಾಜದ ಮುಖಂಡರು ಜಿಲ್ಲಾಧಿಕಾರಿಗಳ ಮೂಲಕ ಮುಖ್ಯಮಂತ್ರಿಗೆ ಮನವಿ ಸಲ್ಲಿಸಿದರು.

ಜಿಲ್ಲಾ ಸಂಘದ ಗೌರವಾಧ್ಯಕ್ಷರಾದ ವೈ.ಯಮುನೇಶ್ ಮಾತನಾಡಿ, ವಿದ್ಯಾರ್ಥಿನಿ ನೇಹಾ ಹಿರೇಮಠ್ ಹತ್ಯೆ ಪ್ರಕರಣದ ನೆನಪು ಮಾಸುವ ಮುನ್ನವೇ ಪ್ರೀತಿ ನಿರಾಕರಣೆ ಕಾರಣಕ್ಕೆ ಹುಬ್ಬಳ್ಳಿಯಲ್ಲಿ ಮತ್ತೊಬ್ಬ ಯುವತಿಯ ನೆತ್ತರ ಹರಿದಿರುವುದು ಇಡೀ ರಾಜ್ಯವೇ ಬೆಚ್ಚಿ ಬೀಳುವಂತಾಗಿದೆ. ಗಿರಿಶ್ ಸಾವಂತ್ ಎಂಬ ಯುವಕ ಅಂಜಲಿ ಅಂಬಿಗೇರಾ ಎಂಬ ಯುವತಿಯನ್ನು ಬೆಳ್ಳಂಬೆಳಿಗ್ಗೆ ಆಕೆಯ ಮನೆಯಲಿ ಹತ್ಯೆ ಮಾಡಿದ್ದಾನೆ. ಅಂಜಲಿಯನ್ನು ಕೊಲೆ ಮಾಡುವುದಾಗಿ ವಿಶ್ವನಾಥನಿಂದ ಬೆದರಿಕೆ ಬಂದ ಬಗ್ಗೆ ಕುಟುಂಬದವರು ಪೊಲೀಸರ ಗಮನಕ್ಕೆ ತಂದಾಗಲೂ ಇದೊಂದು ಸಾಮಾನ್ಯ ಪ್ರಕರಣ ಎನ್ನುವಂತೆ ಪೊಲೀಸ್ ಅಧಿಕಾರಿಗಳು ನಿರ್ಲಕ್ಷ ಮಾಡಿರುವುದು ಮೇಲ್ನೋಟಕ್ಕೆ ಎದ್ದು ಕಾಣುತ್ತದೆ ಎಂದು ಆರೋಪಿಸಿದ ಅವರು, ಪೊಲೀಸರು ಎಚ್ಚೆತ್ತು ಆರೋಪಿಯನ್ನು ಪತ್ತೆ ಹಚ್ಚಿ ಜೈಲುಪಾರು ಮಾಡಿದ್ದರೆ ಈ ಕೃತ್ಯ ನಡೆಯುತ್ತಿರಲಿಲ್ಲ. ಹುಬ್ಬಳ್ಳಿ ನಗರದ ವೀರಾಪುರ ಓಣಿ ನಿವಾಸಿ ಅಂಜಲಿಯನ್ನು ಅದೇ ಓಣಿಯ ನಿವಾಸಿ ಪ್ರೀತಿಸುವಂತೆ ಪೀಡಿಸುತ್ತಿದ್ದ ಆದರೆ ಅಂಜಲಿ ಅದನ್ನು ನಿರಾಕರಿಸಿದ್ದರಿಂದ ವಿಶ್ವನಾಥ ಬುದವಾರ ಬೆಳಿಗ್ಗೆ 5 ಗಂಟೆಗೆ ಅಂಜಲಿ ಮನೆಗೆ ಏಕಾ ಏಕಿ ನುಗ್ಗಿ ನಿದ್ದೆಯಲ್ಲಿದ್ದ ಅಂಜಲಿಗೆ ಚಾಕುವಿನಿಂದ ಇರಿದ. ತೀವ್ರ ರಕ್ತಸ್ರಾವವಾಗಿ ಅಂಜಲಿ ಸ್ಥಳದಲ್ಲಿಯೇ ಮೃತಪಟ್ಟಳು ಎಂಬುವುದಾಗಿ ಸೋದರಿ ದೂರಿನಲ್ಲಿ ಹೇಳಿದ್ದಾಳೆ. ಆರೋಪಿಯನ್ನು ಈಗಾಗಲೇ ಪೊಲೀಸರು ಬಂದಿಸಿರುವುದು ಸ್ವಾಗತಾರ್ಹ. ಮೃತಳು ಈಗಾಗಲೇ ತಂದೆ ತಾಯಿಗಳನ್ನು ಕಳೆದುಕೊಂಡಿದ್ದು ಆಕೆಯೇ ಕುಟುಂಬದ ಜೀವನೋಪಾಯಕ್ಕೆ ಆಶ್ರಯವಾಗಿದ್ದಳು. ಅಂಜಲಿ ಕುಟುಂಬಕ್ಕೆ ಐವತ್ತು ಲಕ್ಷ ರೂ.ಗಳ ಪರಿಹಾರ ಒದಗಿಸಬೇಕೆಂದು ಆಗ್ರಹಿಸಿದರು.



ಜಿಲ್ಲಾ ಸಂಘದ ಅಧ್ಯಕ್ಷ ಅಂಬಾಡಿ ನಾಗರಾಜ್ ಮಾತನಾಡಿ, ಮುಗ್ಧ ಜನರು ಹತ್ಯೆಯಾದಾಗ ಆರೋಪಿಗಳಿಗೆ ನಿರ್ಧಾಕ್ಷಣ್ಯವಾಗಿ ಶಿಕ್ಷೆ ವಿಧಿಸಿ ಜಾತಿ ಧರ್ಮದ ಹಂಗಿಲ್ಲದೇ ಎಲ್ಲರನ್ನು ಸಮಾನವಾಗಿ ಕಂಡಾಗ ಮಾತ್ರ ನೆಲದ ಮೇಲಿನ ಕಾನೂನಿಗೆ ಗೌರವ ನೀಡಿದಂತಾಗುತ್ತದೆ ಎಂದರು.

> ನೇಹಾ ಹಿರೇಮಠ ಹತ್ಯೆಯಾದಾಗ ರಾಜ್ಯ ಹಾಗೂ ರಾಷ್ಟ್ರ ಮಟ್ಟದ ನಾಯಕರು ಮೃತಳ ಮನೆಗೆ ತೆರಳಿ ಪೋಷಕರಿಗೆ ಸಾಂತ್ವನ ಹೇಳಿ ಧೈರ್ಯ ತುಂಬಿದರು ಆದರೆ ಅಂಜಲಿಯ ಹತ್ಯೆಯ ನಂತರ ಯಾವೊಬ್ಬ ಪಕ್ಷದ ಮುಖಂಡರು ಆಕೆಯ ಮನೆಗೆ ಹೋಗದಿರುವುದು ಹಿಂದುಳಿದ ಸಣ್ಣಪುಟ್ಟ ಜಾತಿಗಳ ಬಗ್ಗೆ ಅನಾದರ ಹಾಗೂ ತಾರತಮ್ಯಕ್ಕೆ ಸಾಕ್ಷಿಯಾಗಿದೆ.
>
> – **ಅಂಬಾಡಿ ನಾಗರಾಜ್**, ಜಿಲ್ಲಾಧ್ಯಕ್ಷ, ಗಂಗಾಮತ(ಬೆಸ್ತರ) ಸಮುದಾಯ ಸಂಘಟನೆ

ಈ ಸಂದರ್ಭದಲ್ಲಿ ಸಂಘಟನೆಯ ಪದಾಧಿಕಾರಿಗಳಾದ ಅಂಬಾಡಿ ನಾಗರಾಜ್, ಅಂಬಿಗೇರ ಮಂಜುನಾಥ, ಮೇಘನಾಥ, ಸೂರ್ಯನಾರಾಯಣ, ಮುತ್ತೂರು ರಾಮಣ್ಣ, ಬಾರಕೀರನೀಲಪ್ಪ, ಪ್ರೊ॥ ಉಮಾಮಹೇಶ್ವರ್, ಎಸ್.ನಾಗರಾಜ, ಸುರೇಶ, ಜೆ.ಎಂ. ಅಶೋಕ, ಶ್ರೀಧರ್, ವಿ.ಹೊನ್ನೂರಪ್ಪ, ಎಂ.ರೇಣೇಶ್, ಕಂಪ್ಲಿಅಶೋಕ, ರಾಜೇಶ್, ವರುಣ್, ಮಡ್ಡೇರ್‌ದಾನಪ್ಪ, ನೀಲಪ್ಪ, ಶಶಿಧರ, ಮಲ್ಲಯ್ಯ, ವಿಜಯಕುಮಾರ್ ಮುಂತಾದವರು ಉಪಸ್ಥಿತರಿದ್ದರು.

## ಮೈಕ್ರೋ ನ್ಯೂಸ್

### ಹೆಚ್ಚಿದ ನಾಯಿ ಹಾವಳಿಗೆ ಪೇದೆ ಆಸ್ಪತ್ರೆಗೆ

**ಹಂಪಿ ಟೈಮ್ಸ್ ಹೊಸಪೇಟೆ:**

ನಗರದ ಮದಕರಿ ನಾಯಕ ವೃತ್ತದ ಬಳಿ ಬೀದಿನಾಯಿ ಕಮಲಾಪುರ ಠಾಣೆಯ ಪೇದೆಯೊಬ್ಬರಿಗೆ ಶುಕ್ರವಾರ ಕಚ್ಚಿದ್ದು ಮತ್ತು ಮೂರ್‍ನಾಲ್ಕು ಜನರಿಗೆ ಕಚ್ಚಿದೆ. ನಗರದ ಸರ್ಕಾರಿ ನೂರು ಹಾಸಿಗೆ ಆಸ್ಪತ್ರೆಗೆ ತೆರಳಿ ಪ್ರಾಥಮಿಕ ಚಿಕಿತ್ಸೆ ಪಡೆದಿದ್ದಾರೆ. ನಗರದ ಬೀದಿ ನಾಯಿಗಳ ಹಾವಳಿ ಹೆಚ್ಚಾಗಿದ್ದು ಸಾರ್ವಜನಿಕರು ಆತಂಕಕ್ಕೊಳಗಾಗಿದ್ದಾರೆ. ಬೀದಿ ನಾಯಿಗಳ ನಿಯಂತ್ರಣ ಮಾಡಬೇಕಾದವರು ನಿದ್ದೆಗೆ ಜಾರಿದ್ದಾರೆಯೇ ಎಂದು ಜನರು ಆಕ್ರೋಶ ವ್ಯಕ್ತಪಡಿಸಿದ್ದಾರೆ. ಕೂಡಲೇ ಸಂಬಂಧಿಸಿದ ಅಧಿಕಾರಿಗಳು ನಾಯಿಗಳ ಹಾವಳಿ ತಡೆಗೆ ಕ್ರಮವಹಿಸಿ, ಜನರ ಜೀವ ರಕ್ಷಿಸಬೇಕೆಂದು ಜನರು ಆಗ್ರಹಿಸಿದ್ದಾರೆ.

### 2022-23ನೇ ಸಾಲಿನ ದೂರಶಿಕ್ಷಣ ಫಲಿತಾಂಶ

**ಹಂಪಿ ಟೈಮ್ಸ್ ಹೊಸಪೇಟೆ**

ದೂರಶಿಕ್ಷಣ ನಿರ್ದೇಶನಾಲಯ, ಕನ್ನಡ ವಿಶ್ವವಿದ್ಯಾಲಯ, ಹಂಪಿಯಿಂದ 2022–23ನೇ ಸಾಲಿನ ಪ್ರಥಮ ಹಾಗೂ ಅಂತಿಮ ವರ್ಷದ ಮರುಪರೀಕ್ಷೆ ಹಾಗೂ ಅಂಕಗಳ ಉತ್ತಮೀಕರಣಕ್ಕೆ ಎಂ.ಎ. ಕನ್ನಡ, ಚರಿತ್ರೆ, ಸಮಾಜಶಾಸ್ತ್ರ, ಎಂ.ಜೆ.ಎಂ.ಸಿ. ಸ್ನಾತಕೋತ್ತರ ಪದವಿ ಕೋರ್ಸ್‌ಗಳ ಪರೀಕ್ಷೆಗಳನ್ನು ಏ.2, 2024 ರಿಂದ ಏ.6ರವರೆಗೆ ನಡೆಸಲಾಗಿದೆ. ಮೌಲ್ಯಮಾಪನ ಕಾರ್ಯ ಪೂರ್ಣಗೊಸಿ, ಈಗಾಗಲೇ ತಾತ್ಕಾಲಿಕ ಫಲಿತಾಂಶ ಪಟ್ಟಿಯನ್ನು ಏ.20 ರಂದು ನೀಡಲಾಗಿದ್ದು, ಈಗ ಅಂತಿಮ ಫಲಿತಾಂಶವನ್ನು ಮೇ 17 ರಂದು ವಿಶ್ವವಿದ್ಯಾಲಯದ ಅಂತರಜಾಲ **www.kannadauniversity.org** ದಲ್ಲಿ ಪ್ರಕಟಿಸಲಾಗಿದೆ ಎಂದು ದೂರಶಿಕ್ಷಣ ನಿರ್ದೇಶನಾಲಯದ ನಿರ್ದೇಶಕ ಡಾ.ಎನ್. ಚಿನ್ನಸ್ವಾಮಿ ಸೋಸಲೆ ತಿಳಿಸಿದ್ದಾರೆ.

### ಮುನಿರಾಬಾದ್ ಜೆಸ್ಕಾಂ: ಮೇ 18 ರಂದು ಗ್ರಾಹಕರ ಸಂವಾದ ಸಭೆ

**ಹಂಪಿ ಟೈಮ್ಸ್ ಕೊಪ್ಪಳ**

ಜೆಸ್ಕಾಂ ಮುನಿರಾಬಾದ್ ಉಪವಿಭಾಗ ವ್ಯಾಪ್ತಿಯ ವಿದ್ಯುತ್ ಗ್ರಾಹಕರ ಕುಂದು ಕೊರತೆ ಹಾಗೂ ಅಹವಾಲುಗಳನ್ನು ಸ್ವೀಕರಿಸಲು ಮೇ 18 ರಂದು ಬೆಳಿಗ್ಗೆ 11 ಗಂಟೆಗೆ ಮುನಿರಾಬಾದ್‌ನ ಕಾರ್ಯ ಮತ್ತು ಪಾಲನಾ ವಿಭಾಗ ಕಚೇರಿ ಸಭಾಂಗಣದಲ್ಲಿ ಗ್ರಾಹಕರ ಸಂವಾದ ಸಭೆಯನ್ನು ಹಮ್ಮಿಕೊಳ್ಳಲಾಗಿದೆ.

ವಿದ್ಯುತ್ ಗ್ರಾಹಕರು ಸಭೆಗೆ ಹಾಜರಾಗಿ ವಿದ್ಯುತ್‌ಗೆ ಸಂಬಂಧಿಸಿದ ತಮ್ಮ ದೂರು, ಅಹವಾಲುಗಳನ್ನು ಸಲ್ಲಿಸಿ, ಪರಿಹಾರ ಕಂಡುಕೊಳ್ಳಬೇಕು ಎಂದು ಉಪ ವಿಭಾಗದ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು ತಿಳಿಸಿದ್ದಾರೆ.

# ಮಗುವಿಗೆ ಎರಡು ಬಾರಿ ತಪ್ಪದೇ ದಡಾರ–ರೂಬೆಲ್ಲಾ ಲಸಿಕೆ ಹಾಕಿಸಿ

## ಆರೋಗ್ಯ ವೈದ್ಯಾಧಿಕಾರಿ ಡಾ.ಶೇಗುಫ್ತಾ ಷಾಹೀನ್ ಹೇಳಿಕೆ | ಉಚಿತ ಆರೋಗ್ಯ ತಪಾಸಣೆ ಶಿಬಿರ

**ಹಂಪಿ ಟೈಮ್ಸ್ ಬಳ್ಳಾರಿ**

ಮಕ್ಕಳಿಗೆ ಬಾಲ್ಯದಲ್ಲಿ ಕಾಡುವ ಮಾರಕ ರೋಗಗಳನ್ನು ತಡೆಯಲು ದಡಾರ–ರೂಬೆಲ್ಲಾ ಒಳಗೊಂಡಂತೆ 12 ಮಾರಕ ರೋಗಗಳ ವಿರುದ್ಧ ತಪ್ಪದೇ ಲಸಿಕೆಗಳನ್ನು ಹಾಕಿಸಲು ಪಾಲಕರು ಕೈಜೋಡಿಸಬೇಕು ಎಂದು ಗುಗ್ಗರಹಟ್ಟಿ ನಗರ ಪ್ರಾಥಮಿಕ ಆರೋಗ್ಯ ಕೇಂದ್ರದ ವೈದ್ಯಾಧಿಕಾರಿ ಡಾ.ಶೇಗುಫ್ತಾ ಷಾಹೀನ್ ಅವರು ತಿಳಿಸಿದರು.

ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಗುಗ್ಗರಹಟ್ಟಿ ನಗರ ಪ್ರಾಥಮಿಕ ಆರೋಗ್ಯ ಕೇಂದ್ರ ಇವರ ಆಶ್ರಯದಲ್ಲಿ ಅಲೆಮಾರಿ ಜನತೆ ಹೆಚ್ಚಿರುವ ಪದ್ಮಾವತೆಮ್ಮ ನಗರದಲ್ಲಿ ಶುಕ್ರವಾರ ಹಮ್ಮಿಕೊಂಡಿದ್ದ ಉಚಿತ ಆರೋಗ್ಯ ತಪಾಸಣೆ ಶಿಬಿರದಲ್ಲಿ ಅವರು ಮಾತನಾಡಿದರು.

ದಡಾರವು ಸಾಂಕ್ರಾಮಿಕ ಮತ್ತು ಮರಣಾಂತಿಕ ಖಾಯಿಲೆಯೂ ಆಗಿದ್ದು, ಮಕ್ಕಳಲ್ಲಿ ಅಂಗವಿಕತೆ ಅಥವಾ ಸಾವನ್ನು ಸಹ ತರಬಹುದು. ಇದು ಸೀನುವುದರ ಮೂಲಕ ಇತರರಿಗೆ ಹರಡುತ್ತದೆ. ದಡಾರ ನಿಮ್ಮ ಮಗುವನ್ನು ನ್ಯುಮೋನಿಯಾ, ಅತಿಸಾರ, ಮೆದುಳಿನ ಸೋಂಕಿನಂತ ಪ್ರಣಾಂತಿಕ ಕಾಯಿಲೆಗಳಿಗೆ ತುತ್ತಾಗಬಹುದು. ತುರಿಕೆ, ವಿಪರೀತ ಜ್ವರ, ಕೆಮ್ಮು, ನೆಗಡಿ ಮತ್ತು ಕೆಂಗಣ್ಣು ಇವರು ದಡಾರದ ಮುಖ್ಯ ಲಕ್ಷಣಗಳಾಗಿವೆ ಎಂದು ತಿಳಿಸಿದರು.



ಗರ್ಭಿಣಿ ಸ್ತ್ರೀಯರಲ್ಲಿ ರೂಬೆಲ್ಲಾ ರೋಗವು ಮಕ್ಕಳಲ್ಲಿ ಜನ್ಮತಃವಾಗಿ ಬರುವ ಸಾಧ್ಯತೆ ಇದ್ದು, ಮೊದಲ ತ್ರೈಮಾಸಿಕ ಗರ್ಭಾವಸ್ಥೆಯಲ್ಲಿ ಮಗುವಿನ ವಿಪರೀತ ಅಥವಾ ಮರಣಾಂತಿಕ ಆರೋಗ್ಯ ಸಮಸ್ಯೆಯನ್ನು ತಂದೊಡ್ಡಬಹುದಾಗಿದೆ ಎಂದರು.

ಯಾವುದೇ ಮುಂಜಾಗ್ರತೆ ವಹಿಸದ ತಾಯಂದಿರಲ್ಲಿ ಕಂಡುಬರುವ ರೂಬೆಲ್ಲಾ ವೈರಸ್, ಮಗುವಿಗೆ ಗ್ಲುಕೋಮಾ, ಕಿವುಡುತನ, ಕಣ್ಣಿನಪೊರೆ, ಮೆದುಳು (ಮಾನಸಿಕತೆ ಅಸ್ವಸ್ಥತೆ ಅಥವಾ ಬುದ್ಧಿಮಾಂದ್ಯತೆ) ಮತ್ತು ಹೃದಯ ಸಂಬಂಧಿತ ಕಾಯಿಲೆಗಳಿಗೆ ಈಡು ಮಾಡಬಹುದು ಮತ್ತು ಗರ್ಭಪಾತ ಅಥವಾ ನಿರ್ಜೀವ ಜನನಕ್ಕೆ ಕಾರಣವಾಗಬಹುದು ಎಂದು ತಿಳಿಸಿಕೊಟ್ಟರು.

ದಡಾರ–ರೂಬೆಲ್ಲಾ ಲಸಿಕೆಯನ್ನು ಎರಡು ಬಾರಿ ಅಂದರೆ, ಮಗುವಿನ ಒಂಭತ್ತು ತಿಂಗಳು ವಯಸ್ಸು ತುಂಬಿದ ನಂತರ ಹಾಗೂ ಮಗುವಿನ ಒಂದುವರೆ ವರ್ಷದಲ್ಲಿ ಹಾಕಿಸುವ ಮೂಲಕ ರೋಗ ತಡೆಯಲು ಸಹಕರಿಸಬೇಕು ಎಂದು ವೈದ್ಯಾಧಿಕಾರಿ ವಿನಂತಿಸಿದರು.

ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಈಶ್ವರ ಹೆಚ್ ದಾಸಪ್ಪನವರ ಮಾತನಾಡಿ, ಮುಂಗಾರು ಮಳೆಯ ಆರಂಭಿಕ ಹಂತವಾಗಿರುವುದರಿಂದ ಅಲ್ಲಲ್ಲಿ ನೀರು ನಿಂತುಕೊಳ್ಳುವುದು ತಪ್ಪಿಸಬೇಕು, ಸೊಳ್ಳೆಗಳ ಉತ್ಪತ್ತಿಯಿಂದ ಡೆಂಗ್ಯೂ ರೋಗ ಹರಡುವ ಸಾಧ್ಯತೆಯಿದ್ದು, ಮನೆ ಸುತ್ತಲೂ ಸ್ವಚ್ಛತೆ ಕಾಪಾಡುವಂತೆ ತಿಳಿಸಿದರು.

ಅಧಿಕಾರಿಗಳು, ಸಿಬ್ಬಂದಿ, ಸ್ಥಳೀಯರು ಇದ್ದರು.

# ರೈತರ ಬೆಳೆಯ ಮೊತ್ತವನ್ನು ಸಾಲದ ಖಾತೆಗೆ ಜಮೆ ಮಾಡುವಂತಿಲ್ಲ: ಡಿಸಿ

**ಹಂಪಿ ಟೈಮ್ಸ್ ಕೊಪ್ಪಳ**

ಬರಗಾಲದ ಹಿನ್ನೆಲೆಯಲ್ಲಿ ಸರ್ಕಾರದಿಂದ ರೈತರ ಖಾತೆಗೆ ಜಮೆ ಆಗುವ ಬೆಳೆ ಪರಿಹಾರದ ಮೊತ್ತವನ್ನು ರೈತರ ಸಾಲದ ಖಾತೆಗೆ ಜಮೆ ಮಾಡುವಂತಿಲ್ಲ ಎಂದು ಜಿಲ್ಲಾಧಿಕಾರಿ ನಲಿನ್ ಅತುಲ್ ಅವರು ಬ್ಯಾಂಕ್‌ಗಳ ಪ್ರತಿನಿಧಿಗಳಿಗೆ ಸೂಚನೆ ನೀಡಿದರು.

ಗುರುವಾರದಂದು ಜಿಲ್ಲೆಯ ಬ್ಯಾಂಕರ್ಸ್ ಹಾಗೂ ಆರ್‌ಬಿಐ ಪ್ರತಿನಿಧಿಗಳೊಂದಿಗೆ ಆಯೋಜಿಸಿದ್ದ ಸಭೆಯಲ್ಲಿ ಅವರು ಮಾತನಾಡಿದರು.

2023–24ನೇ ಸಾಲಿನಲ್ಲಿ ಮುಂಗಾರು ಹಂಗಾಮಿನಲ್ಲಿ ಜಿಲ್ಲೆಯ 07 ತಾಲ್ಲೂಕುಗಳನ್ನು ಬರಪೀಡಿತ ತಾಲ್ಲೂಕುಗಳೆಂದು ಘೋಷಿಸಿದ್ದು, ಈಗಾಗಲೇ ಸರ್ಕಾರದಿಂದ ರೈತರ ಖಾತೆಗೆ ಇನ್‌ಪುಟ್ ಸಬ್ಸಿಡಿ (ಪರಿಹಾರ) ಜಮೆ ಮಾಡಲಾಗುತ್ತಿದೆ. ಈ ಪರಿಹಾರ ಮೊತ್ತವನ್ನು ಕೆಲವು ಬ್ಯಾಂಕ್‌ಗಳು ರೈತರಿಗೆ ನೀಡದೆ ಸಾಲದ ಖಾತೆಗೆ ಜಮೆ ಮಾಡಲಾಗುತ್ತಿದೆ ಎಂಬ ದೂರುಗಳು ಬಂದಿವೆ. ಇದು ಎನ್‌ಡಿಆರ್‌ಎಫ್ ಹಾಗೂ ಎಸ್‌ಡಿಆರ್‌ಎಫ್ ನಿಯಮಗಳ ಉಲ್ಲಂಘನೆಯಾಗಿದೆ. ಆದ್ದರಿಂದ ತಮ್ಮ ಅಧೀನದಲ್ಲಿ ಬರುವ ಎಲ್ಲ ಬ್ಯಾಂಕ್‌ಗಳು ಹಾಗೂ ಬ್ಯಾಂಕ್ >>4

# ಅಲ್ಪಸಂಖ್ಯಾತರ ವಸತಿ ಕಾಲೇಜುಗಳಲ್ಲಿ ಪಿಯುಸಿ ಪ್ರವೇಶಕ್ಕಾಗಿ ಅರ್ಜಿ ಆಹ್ವಾನ

**ಹಂಪಿ ಟೈಮ್ಸ್ ಹೊಸಪೇಟೆ**

ವಿಜಯನಗರ ಜಿಲ್ಲೆಯಲ್ಲಿ ಅಲ್ಪಸಂಖ್ಯಾತ ಕಲ್ಯಾಣ ಇಲಾಖೆಯಿಂದ ಕಾರ್ಯನಿರ್ವಹಿಸುತ್ತಿರುವ ಅಲ್ಪಸಂಖ್ಯಾತರ ಡಾ.ಎ.ಪಿ.ಜೆ. ಅಬ್ದುಲ್ ಕಲಾಂ ಮತ್ತು ಮೊರಾರ್ಜಿ ದೇಸಾಯಿ ಬಾಲಕ, ಬಾಲಕಿಯರ ಪದವಿ ಪೂರ್ವ ವಸತಿ ಕಾಲೇಜುಗಳಿಗೆ 2024–25ನೇ ಶೈಕ್ಷಣಿಕ ವರ್ಷಕ್ಕೆ ವಿಜ್ಞಾನ ಮತ್ತು ವಾಣಿಜ್ಯ ವಿಭಾಗಗಳ ಪ್ರಥಮ ಪಿಯುಸಿಗೆ ಉಚಿತವಾಗಿ ಪ್ರವೇಶ ಪಡೆಯಲು ಅರ್ಜಿ ಆಹ್ವಾನಿಸಲಾಗಿದೆ.

ಅಲ್ಪಸಂಖ್ಯಾತರ ಸಮುದಾಯಕ್ಕೆ ಶೇ.75ರಷ್ಟು ಹಾಗೂ ಇತರೆ ಸಮುದಾಯಕ್ಕೆ ಶೇ.25ರಷ್ಟು ಮೀಸಲಾತಿ ಇದ್ದು ವಿದ್ಯಾರ್ಥಿಗಳು ಪ್ರವೇಶಕ್ಕಾಗಿ ಅರ್ಜಿಯನ್ನು ಸಲ್ಲಿಸಲು ಮೇ27 ಕೊನೆಯ ದಿನವಾಗಿರುತ್ತದೆ.

ಆಸಕ್ತಿಯುಳ್ಳ ವಿದ್ಯಾರ್ಥಿಗಳು ಮತ್ತು ಪಾಲಕರು ವಸತಿ ಶಾಲೆ ಮತ್ತು ತಾಲ್ಲೂಕು ವಿಸ್ತರಣಾಧಿಕಾರಿಗಳ ಕಚೇರಿ, ಜಿಲ್ಲಾ ಮತ್ತು ತಾಲ್ಲೂಕು ಮಾಹಿತಿ ಕೇಂದ್ರಗಳಿಗೆ ಖುದ್ದಾಗಿ ಭೇಟಿ ನೀಡಿ ಉಚಿತವಾಗಿ ಅರ್ಜಿಯನ್ನು ಪಡೆದು ಸಲ್ಲಿಸಬಹುದಾಗಿದೆ.

**ಮಾಹಿತಿ ಕೇಂದ್ರಗಳ ವಿವರ:**

ಹೊಸಪೇಟೆ ತಾಲ್ಲೂಕಿನ ಡಾ.ಎ.ಪಿ.ಜೆ ಅಬ್ದುಲ್ ಕಲಾಂ ವಸತಿ ಶಾಲೆ ಮೊ:9901302904, ಕೂಡ್ಲಿಗಿ ತಾಲ್ಲೂಕಿನ ತಾಯಕನಹಳ್ಳಿಯ ಅಲ್ಪಸಂಖ್ಯಾತರ ಮೊರಾರ್ಜಿ ದೇಸಾಯಿ ವಸತಿ ಶಾಲೆ ಮೊ:9964915789, ಹೊಸಪೇಟೆಯ ತಾಲ್ಲೂಕು ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ವಿಸ್ತರಣಾಧಿಕಾರಿಗಳು ಮೊ:8073250473., ಹರಪನಹಳ್ಳಿ ತಾಲೂಕಿನ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ತಾಲೂಕು ವಿಸ್ತರಣಾಧಿಕಾರಿಗಳು ಮೊ:7676621339., ಜಿಲ್ಲಾ ಮಾಹಿತಿ ಕೇಂದ್ರ ಹೊಸಪೇಟೆ ಮೊ:8050435366., ಕೂಡ್ಲಿಗಿ ತಾಲ್ಲೂಕು ಮಾಹಿತಿ ಕೇಂದ್ರ ಮೊ:9060330060., ಹಗರಿಬೊಮ್ಮನಹಳ್ಳಿ ತಾಲ್ಲೂಕು ಮಾಹಿತಿ ಕೇಂದ್ರ ಮೊ:9980237242., ಹರಪನಹಳ್ಳಿ ತಾಲ್ಲೂಕು ಮಾಹಿತಿ ಕೇಂದ್ರ ಮೊ:8494927891., ಹಡಗಲಿ ತಾಲ್ಲೂಕು ಮಾಹಿತಿ ಕೇಂದ್ರ ಮೊ:7353696984ಗೆ ಸಂಪರ್ಕಿಸಬಹುದಾಗಿದೆ.

**ಹೆಚ್ಚಿನ ಮಾಹಿತಿಗಾಗಿ:** ಜಿಲ್ಲಾ ಅಲ್ಪಸಂಖ್ಯಾತರ ಅಧಿಕಾರಿಗಳ ಕಾರ್ಯಾಲಯ, ಎಸ್.ಎಮ್.ಎಸ್.ಕೆ ಪ್ಲಾಜಾ ಗುಗ್ರೀ ನರ್ಸಿಂಗ್ ಹೋಮ್ ಪಕ್ಕದಲ್ಲಿ ಅಂಬೇಡ್ಕರ್ ಸರ್ಕಲ್ ಹತ್ತಿರ (ಹೊಸಪೇಟೆ)ವಿಜಯನಗರ ಕಚೇರಿ ದೂರವಾಣಿ :08394–200206 ಅಥವಾ 24*7 ಸಹಯವಾಣಿ ಕೇಂದ್ರ ಮೊ:8277799990ಗೆ ಸಂಪರ್ಕಿಸಬಹುದಾಗಿದೆ ಎಂದು ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಪ್ರೌಢಶಾಲಾ ವಿದ್ಯಾರ್ಥಿಗಳಿಗೆ ಪ್ರಬಂಧ ಸ್ಪರ್ಧೆ

## ಆಯ್ಕೆಯಾದ ವಿಶ್ವ ಪರಿಸರ ಪ್ರಬಂಧಗಳಿಗೆ ಬಹುಮಾನ | ಕನ್ನಡ/ಇಂಗ್ಲಿಷ್‌ನಲ್ಲಿ ಬರೆಯಬಹುದು | ಮೇ.27 ಕೊನೆದಿನ

**ಹಂಪಿ ಟೈಮ್ಸ್ ಹೊಸಪೇಟೆ**

ಕರ್ನಾಟಕ ವಿಜ್ಞಾನ ಮತ್ತು ತಂತ್ರಜ್ಞಾನ ಅಕಾಡೆಮಿ ಮತ್ತು ಪರಿಸರ ಸಂಘ ಬೆಂಗಳೂರು ಜಂಟಿಯಾಗಿ ಜೂನ್ 8ರ ವಿಶ್ವ ಪರಿಸರ ದಿನಾಚರಣೆಯ ಅಂಗವಾಗಿ "ಮಣ್ಣು ಮತ್ತು ಭೂಮಿಯ ಮೇಲೆ ಹವಾಮಾನ ಬದಲಾವಣೆಯ ಪರಿಣಾಮಗಳು" ವಿಷಯದ ಕುರಿತು ಪ್ರೌಢ ಶಾಲಾ ವಿದ್ಯಾರ್ಥಿಗಳಿಗೆ ಪ್ರಬಂಧ ಸ್ಪರ್ಧೆಯನ್ನು ಆಯೋಜಿಸಿದೆ.

ಪ್ರಬಂಧವು 1000 ಪದಗಳನ್ನು ಮೀರಬಾರದು ಮತ್ತು ಇಂಗ್ಲಿಷ್ ನಲ್ಲಿ ಏರಿಯಾಲ್ ಫಾಂಟ್ ಗಾತ್ರ 14 ಮತ್ತು ಕನ್ನಡದಲ್ಲಿ ನುಡಿ ಯೂನಿಕೋಡ್ 12 ಗಾತ್ರದಲ್ಲಿ ಟೈಪ್ ಮಾಡಿ ಕಳುಹಿಸಬೇಕು.

ಕರ್ನಾಟಕ ರಾಜ್ಯದ ಯಾವುದೇ ಮಂಡಳಿಯಲ್ಲಿ ಪ್ರಸ್ತುತ ದಾಖಲಾದ ಪ್ರೌಢಶಾಲಾ ವಿದ್ಯಾರ್ಥಿಗಳು ಈ ಪ್ರಬಂಧ ಸ್ಪರ್ಧೆಯಲ್ಲಿ ಭಾಗವಹಿಸಬಹುದು. ಪ್ರಬಂಧಗಳನ್ನು ಕನ್ನಡ ಅಥವಾ ಇಂಗ್ಲಿಷ್‌ನಲ್ಲಿ ಸಲ್ಲಿಸಬಹುದು. ಪ್ರತಿ ಭಾಷೆಗೆ ಒಬ್ಬ ಸ್ಪರ್ಧಿಗೆ ಕೇವಲ ಒಂದು ಪ್ರಬಂಧವನ್ನು ಮಾತ್ರ ಸಲ್ಲಿಸಲು ಅವಕಾಶವಿದೆ ಯಾವುದೇ ಸ್ಪರ್ಧಿಯು ಒಂದು ನಿರ್ದಿಷ್ಟ ಭಾಷೆಯಲ್ಲಿ ಒಂದಕ್ಕಿಂತ ಹೆಚ್ಚು ಪ್ರಬಂಧಗಳನ್ನು ಸಲ್ಲಿಸಿರುವುದು ಕಂಡುಬಂದರೆ, ಅವರು ಸಲ್ಲಿಸಿದ ಎಲ್ಲಾ ಪ್ರಬಂಧಗಳನ್ನು ಅಮಾನ್ಯವೆಂದು ಪರಿಗಣಿಸಲಾಗುತ್ತದೆ. ಪ್ರಬಂಧದ ಕೊನೆಯಲ್ಲಿ ಹೆಸರು, ವಿಳಾಸ ಸಂಪರ್ಕ ಸಂಖ್ಯೆ ಮತ್ತು ಇ–ಮೇಲ್ ವಿವರಗಳನ್ನು ಒದಗಿಸಬೇಕು. ಪ್ರಬಂಧವನ್ನು ಸಲ್ಲಿಸಲು ಮೇ 27 ಕೊನೆಯ ದಿನಾಂಕವಾಗಿದೆ.


HAMPI TIMES
SCAN & READ


ಆಯ್ಕೆಯಾಗುವ ಮೊದಲ ಮೂರು ಸ್ಥಾನ ಪಡೆದ ಪ್ರಬಂಧಗಳಿಗೆ ಪ್ರಥಮ ರೂ. 5000/–, ದ್ವಿತೀಯ ರೂ. 3000/– ಹಾಗೂ ತೃತೀಯ ರೂ. 2000/– ನಗದು ಬಹುಮಾನಗಳನ್ನು ನೀಡಲಾಗುವುದು. ಇಂಗ್ಲಿಷ್ ಮತ್ತು ಕನ್ನಡ ಪ್ರಬಂಧಗಳಿಗೆ ಪ್ರತ್ಯೇಕವಾಗಿ ಬಹುಮಾನಗಳನ್ನು ನೀಡಲಾಗುವುದು. ಸ್ಪರ್ಧೆಯ ವಿಜೇತರನ್ನು ಇ–ಮೇಲ್ ಮೂಲಕ ಸಂಪರ್ಕಿಸಲಾಗುತ್ತದೆ.

ಎಲ್ಲಾ ಪ್ರಬಂಧಗಳು ಕರ್ನಾಟಕ ವಿಜ್ಞಾನ ಮತ್ತು ತಂತ್ರಜ್ಞಾನ ಅಕಾಡೆಮಿ ಮತ್ತು ಪರಿಸರ ಸಂಘ ಬೆಂಗಳೂರು ಜಂಟಿ ಒಡೆತನಕ್ಕೆ ಒಳಗೊಂಡಿರುತ್ತವೆ ಹಾಗೂ ಪ್ರಬಂಧಗಳನ್ನು ಯಾವುದೇ ಉದ್ದೇಶಕ್ಕಾಗಿ ಯಾವುದೇ ಮಾಧ್ಯಮದಲ್ಲಿ ಬಳಸುವ, ಪುನರುತ್ಪಾದಿಸುವ, ಪ್ರಕಟಿಸುವ, ಪ್ರಸಾರ ಮಾಡುವ ಅಥವಾ ಇತರ ರೀತಿಯಲ್ಲಿ ಸಂವಹನ ನಡೆಸುವ ಹಕ್ಕನ್ನು ಹೊಂದಿರುತ್ತದೆ.

ಮೌಲ್ಯಮಾಪನ ಮಾನದಂಡಗಳಿಗೆ ಸಂಬಂಧಿಸಿದಂತೆ ಯಾವುದೇ ವಿಚಾರಣೆಯನ್ನು ಪುರಸ್ಕರಿಸಲಾಗುವುದಿಲ್ಲ. ಅಗತ್ಯವಿದ್ದರೆ ಮೇಲಿನ ನಿಯಮಗಳಿಗೆ ತಿದ್ದುಪಡಿಗಳನ್ನು ತರಲು ಮತ್ತು ಸ್ಪರ್ಧೆಯ ವಿಜೇತರನ್ನು ಆಯ್ಕೆ ಮಾಡುವ ಅಂತಿಮ ಹಕ್ಕನ್ನು ಕರ್ನಾಟಕ ವಿಜ್ಞಾನ ಮತ್ತು ತಂತ್ರಜ್ಞಾನ ಅಕಾಡೆಮಿ ಮತ್ತು ಪರಿಸರ ಸಂಘ ಬೆಂಗಳೂರು ಹೊಂದಿರುತ್ತದೆ.

ಪ್ರಬಂಧದ ಹಾರ್ಡ್ ಕಾಪಿಯನ್ನು ಕರ್ನಾಟಕ ವಿಜ್ಞಾನ ಮತ್ತು ತಂತ್ರಜ್ಞಾನ ಅಕಾಡೆಮಿ ಪ್ರೊ. ಯು.ಆರ್.ರಾವ್ ವಿಜ್ಞಾನ ಭವನ, ಮೇಜರ್ ಸಂದೀಪ್ ಉನ್ನಿಕೃಷ್ಣನ್ ರಸ್ತೆ, ತೋಟಗಾರಿಕೆ ವಿಜ್ಞಾನ ಕಾಲೇಜು ಪ್ರವೇಶ ದ್ವಾರದ ಬಳಿ, ವಿದ್ಯಾರಣ್ಯಪುರ ಪೋಸ್ಟ್, ಯಲಹಂಕ, ಬೆಂಗಳೂರು– 560097ಕ್ಕೆ ಅಂಚೆ ಮೂಲಕ ಮತ್ತು ಪಿಡಿಎಫ್ ಪ್ರತಿಯನ್ನು ಅಕಾಡೆಮಿಯ ಇ–ಮೇಲ್ **essay.ksta@gmail.com** ಗೆ ಕಳುಹಿಸಲು ಅಧಿಕೃತ ಪ್ರಕಟಣೆ ತಿಳಿಸಿದೆ.